## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ. 1588/2021

ಸಾಕ್ಷಿದಾರರ ಹೇಳಿಕೆಃ

| | | | |
|---|---|---|---|
| **ಹೆಸರು** | : ನಾಗರಾಜಪ್ಪ | ಚಾಸಾಃ **2** | ಪ್ರಾಸಾಃ **2** |
| **ತಂದೆಯ ಹೆಸರು** | : ಭರ್ಮಪ್ಪ | | |
| **ವಯಸ್ಸು** | : **45** ವರ್ಷ | | |
| **ವೃತ್ತಿ** | : ವ್ಯವಸಾಯ | | |
| **ವಾಸಸ್ಥಳ** | : ಹೊಳೆಹರಳಹಳ್ಳಿ ಗ್ರಾಮ | | |

ದಿನಾಂಕಃ **23.10.2025** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಚಾಸಾ-1 ಗೊತ್ತು. ಚಾಸಾ-3 ನನ್ನ ಅಳಿಯ. ಈಗೇ ಸುಮಾರು 3 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ 3 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ ಮು.ಮಾ.1 ಮತ್ತು 2 ಅನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು 2 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ.

ಪೊಲೀಸ್ ನೋಟೀಸನ್ನು ಈಗಾಗಲೇ ನಿಪಿ-18 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-18(ಎ) ಎಂದು, ಸ್ಥಳ ಮಹಜರ್ ಅನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು, ನಿಪಿ-4 ಮತ್ತು 5 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ಪೊಲೀಸರಿಂದ ನಿಪಿ-18 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 07-02-2021 ರಂದು ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಸಂಜೆ 05-00 ರಿಂದ 06-00 ಗಂಟೆ ಸಮಯದಲ್ಲಿ ನಿಪಿ-2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ, ನಿಪಿ-3 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ, ಮು.ಮಾ.1 ಮತ್ತು 2 ಅನ್ನು ಅಮಾನತ್ತು ಪಡಿಸಿಕೊಂಡು ನಿಪಿ-4 ಮತ್ತು 5 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-19 ರಂತೆ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.